ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 54 ಎಲ್‌ಇಟಿ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 30/05/2020

ಅಧಿಸೂಚನೆ

1948ರ ಕನಿಷ್ಠ ವೇತನ ಕಾಯ್ದೆ, (1948ರ ಕೇಂದ್ರಾಧಿನಿಯಮ XI) ರ ಅನುಸೂಚಿಗೆ **" ಗೊಂಬೆ ತಯಾರಿಕೆ ಉದ್ದಿಮೆಗಳಲ್ಲಿ ಉದ್ಯೋಗ "** ಈ ಉದ್ದಿಮೆಯಲ್ಲಿ ತೊಡಗಿರುವ ಕಾರ್ಮಿಕರಿಗೆ ಕನಿಷ್ಠ ವೇತನ ನಿಗಧಿಪಡಿಸಬೇಕೆಂದು ಕರ್ನಾಟಕ ಸರ್ಕಾರವು ಭಾವಿಸಿರುವುದರಿಂದ, ಸದರಿ ಉದ್ದಿಮೆಯನ್ನು ಕನಿಷ್ಠ ವೇತನ ಕಾಯ್ದೆಯ ಅನುಬಂಧದ ಭಾಗ–1ಕ್ಕೆ ಸೇರ್ಪಡೆ ಮಾಡುವ ಬಗ್ಗೆ ಸರ್ಕಾರವು ಕರಡು ಪ್ರಸ್ತಾವನೆಯನ್ನು ದಿನಾಂಕ: 19/11/2019 ರಂದು ಪ್ರಕಟಿಸಿ, ಇದರಿಂದ ಭಾದಿತರಾಗುವ ಹಾಗೂ ಸಂಬಂಧವಿರುವ ವ್ಯಕ್ತಿಗಳಿಂದ ಸಲಹೆ/ಆಕ್ಷೇಪಣೆಗಳನ್ನು ಸ್ವೀಕರಿಸಲು ಮೂರು ತಿಂಗಳ ಕಾಲಾವಧಿಯನ್ನು ನೀಡಲಾಗಿತ್ತು. ಸದರಿ ಅವಧಿಯಲ್ಲಿ ಈ ಬಗ್ಗೆ ಯಾವುದೇ ಸಲಹೆ/ಆಕ್ಷೇಪಣೆಗಳು ಸ್ವೀಕೃತಗೊಂಡಿರುವುದಿಲ್ಲ.

ಆದ್ದರಿಂದ ಕನಿಷ್ಠ ವೇತನ ಕಾಯ್ದೆ 1948ರ (1948ರ ಕೇಂದ್ರಾಧಿ ನಿಯಮ XI)ರ ಸೆಕ್ಷನ್ 27ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **" ಗೊಂಬೆ ತಯಾರಿಕೆ ಉದ್ದಿಮೆಗಳಲ್ಲಿ ಉದ್ಯೋಗ"** ಉದ್ದಿಮೆಯನ್ನು ಕನಿಷ್ಠ ವೇತನ ಕಾಯ್ದೆಯ ಅನುಬಂಧ ಭಾಗ–1ಕ್ಕೆ ಸೇರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

30.5.2020
(ಡಿ.ಧನಂಜಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

ಕಾರ್ಮಿಕ ಆಯುಕ್ತರವರ ಕಛೇರಿ ... ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
ನಂ. 95
ದಿನಾಂಕ

02/06/20

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು– ಈ ಅಧಿಸೂಚನೆಯನ್ನು ರಾಜ್ಯಪತ್ರದಲ್ಲಿ ಪ್ರಕಟಿಸುವುದು.

**ಪ್ರತಿಯನ್ನು:**

32
5/6/2020

1) ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
2) ಸದಸ್ಯ ಕಾರ್ಯದರ್ಶಿ, ಕರ್ನಾಟಕ ಕನಿಷ್ಟ ವೇತನ ಸಲಹಾ ಮಂಡಳಿ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
3) ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು
6) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.